**1 ನೇ ಹೆಚ್ಚುವರಿ ಹಿರಿಯ ವ್ಯವಹಾರ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಸಾಗರ**

ಸಿ.ಸಿ. ನಂ.2401/2025

ಸಾಕ್ಷಿದಾರರ ಹೆಸರು : ರವೀಂದ್ರ

ತಂದೆಯ/ಗಂಡನ ಹೆಸರು : ರಾಮಂದ್ರಯ್ಯ

ವಯಸ್ಸು : 69 ವರ್ಷ

ಉದ್ಯೋಗ : ವ್ಯವಸಾಯ

ವಾಸಃ : ಮಂಕಳಲೆ

ಸಿ ಡಬ್ಲ್ಯೂ – 1 ಪಿ.ಡಬ್ಲ್ಯೂ – 1

**ದಿನಾಂಕ 13.07.2026. ರಂದು ಸಾಕ್ಷಿಗೆ ಪ್ರಮಾಣ ಭೋಧಿಸಲಾಯಿತು.**

**ಮುಖ್ಯ ವಿಚಾರಣೆ:– ಸ.ಸ. ಅ ರವರಿಂದಃ**

ನನಗೆ ಆರೋಪಿ ಪರಿಚಯ ಇರುವುದಿಲ್ಲ. ಆರೋಪಿ ನನ್ನನು ಅಡ್ಡಗಟ್ಟಿರುವುದಿಲ್ಲ, ಅವಾಚ್ಯ ಶಬ್ದಗಳಿಂದ ಬೈದಿರುವುದಿಲ್ಲ, ಆರೋಪಿ ನಮ್ಮ ತೋಟಕ್ಕೆ ಅಕ್ರಮ ಪ್ರವೇಶ ಮಾಡಿರುವುದಿಲ್ಲ, ಆರೋಪಿ ಕೊಲೆ ಬೆದರಿಕೆ ಹಾಕಿರುವುದಿಲ್ಲ, ಯಾವುದೇ ನಷ್ಟ ಉಂಟು ಮಾಡಿರುವುದಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಗೊತ್ತಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ ಮೇರೆಗೆ ಸದರಿ ಕಂಪ್ಲೆಂಟನ್ನು ನಿಶಾನೆ ಪಿ 1 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಶಾನೆ ಪಿ 1(ಎ) ಮತ್ತು 1(ಬಿ) ಎಂದು ಗುರುತಿಸಲಾಯಿತು. ನಿಶಾನೆ ಪಿ 1 ರಲ್ಲಿ ಬರೆದಿರುವ ಅಂಶಗಳು ನನಗೆ ಗೊತ್ತಿರುವುದಿಲ್ಲ. ನಿಶಾನೆ ಪಿ 1 ಕ್ಕೆ ಪೋಲಿಸರ ಕೋರಿಕೆಯ ಮೇರೆಗೆ ನಾನು ಸಹಿಯನ್ನು ಹಾಕಿರುತ್ತೇನೆ.

ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ ಮೇರೆಗೆ ಮಹಜರನ್ನು ನಿಶಾನೆ ಪಿ 2 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಶಾನೆ ಪಿ 2(ಎ) ಎಂದು ಗುರುತಿಸಲಾಯಿತು.

ನಿಶಾನೆ ಪಿ 1 ಮತ್ತು 2 ರಲ್ಲಿ ಬರೆದಿರುವ ಅಂಶಗಳು ನನಗೆ ಗೊತ್ತಿರುವುದಿಲ್ಲ. ನಿಶಾನೆ ಪಿ 1 ಕ್ಕೆ ಗ್ರಾಮಸ್ತರ ಮಾತು ಕೇಳಿಕೊಂಡು ಸಹಿಯನ್ನು ಹಾಕಿರುತ್ತೇನೆ, ನಿಪಿ–2 ಕ್ಕೆ ಪೋಲಿಸರ ಕೋರಿಕೆಯ ಮೇರೆಗೆ ನಾನು ಸಹಿಯನ್ನು ಹಾಕಿರುತ್ತೇನೆ. ನಿಶಾನೆ ಪಿ 2 ರಡಿಯಲ್ಲಿ ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿರುವುದಿಲ್ಲ.

ನಾನು ವ್ಯವಸಾಯ ಮಾಡುವಾಗ ಬಿದ್ದು ಪೆಟ್ಟು ಮಾಡಿಕೂಂಡಿದ್ದು, ಅದರ ಪ್ರಯುಕ್ತ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆದು ಕೊಂಡಿರುತ್ತೇನೆ.

ಪೋಲಿಸರು ಈ ಪ್ರಕರಣದ ಬಗ್ಗೆ ನನ್ನನ್ನು ವಿಚಾರಣೆ ಮಾಡಿರುವುದಿಲ್ಲ. ನಾನು ಯಾವುದೇ ಹೇಳಿಕೆಯನ್ನು ಪೋಲಿಸರಿಗೆ ನೀಡಿರುವುದಿಲ್ಲ.

(ಸಾಕ್ಷಿಯನ್ನು ಸರ್ಕಾರಿ ವಕೀಲರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)

**ಪಾಟೀ ಸವಾಲು ಸ.ಸ.ಅ ರವರಿಂದಃ**

ದಿನಾಂಕಃ03.02.2023 ರಂದು ರಾತ್ರಿ 10.30 ಗಂಟೆ ಸಮಯದಲ್ಲಿ ಅರೋಪಿಯು ನನ್ನ ಹಾಲಿ ನಿವೇಶನಕ್ಕೆ ಅಕ್ರಮ ಪ್ರವೇಶ ಮಾಡಿರುತ್ತಾರೆ ಎಂದರೆ ಸರಿಯಲ್ಲ, ನನ್ನನ್ನು ಅಡ್ಡಗಟ್ಟಿರುತ್ತಾರೆ ಎಂದರೆ ಸರಿಯಲ್ಲ, ನನಗೆ ಅವಾಚ್ಯಶಬ್ದಗಳಿಂದ ಬೈದಿರುತ್ತಾರೆ ಎಂದರೆಸರಿಯಲ್ಲ, ಆರೋಪಿ ನನಗೆ ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆಸರಿಯಲ್ಲ, ನನಗೆ ನಷ್ಟ ಉಂಟು ಮಾಡಿರುತ್ತಾರೆ ಎಂದರೆ ಸರಿಯಲ್ಲ. ನನಗೆ ಈ ಘಟನೆ ಬಗ್ಗೆ ಗೊತ್ತಿರುವುದಿಲ್ಲ.

ನಿಶಾನೆ ಪಿ –1 ಕ್ಕೆ ನಾನು ಓದಿ ನೋಡಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ . ನಿಶಾನೆ ಪಿ 1 ರಲ್ಲಿ ಬರೆದಿರುವ ಅಂಶಗಳು ನನಗೆ ಗೊತ್ತಿದೆ ಎಂದರೆ ಸರಿಯಲ್ಲ.

ದಿನಾಂಕಃ 16.05.2023 ರಂದು ಬೆಳಿಗ್ಗೆ 11 ಗಂಟೆಯಿಂದ 12 ಗಂಟೆ ಯವರೆಗೆ ನನ್ನ, ಚಾಸಾ–2 ಮತ್ತು 3 ರವರ ಸಮಕ್ಷಮ ನಿಶಾನೆ ಪಿ 2 ರಂತೆ ಪೋಲಿಸರು ಮಹಜರ್ ಅನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಿಶಾನೆ ಪಿ 2 ಅನ್ನು ಓದಿ ನೋಡಿ

ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

ನನಗೆ ಈಗ ಓದಿ ಹೇಳಿದಂತೆ "ನಾನು ಈ ಮೇಲ್ಕಂಡ ವಿಳಾಸದಲ್ಲಿ ..... ಪುನಃ ನೋಡಿದರೆ ಗುರುತಿಸುತ್ತೇನೆ " ಎಂದು ಪೋಲಿಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ಉಲ್ಲೇಖಕ್ಕಾಗಿ ನಿಶಾನೆ ಪಿ–3 ಎಂದು ಗುರುತಿಸಲಾಯಿತು.

ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಾ ಎಂದರೆ ಸರಿಯಲ್ಲ.

**ಆರೋಪಿ ಪರ ಪಾಟೀ ಸವಾಲು ಇಲ್ಲ.**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಣಗೊಳಿಸಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

1 ನೇ ಹೆಚ್ಚುವರಿ ಹಿರಿಯ ವ್ಯವಹಾರ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಸಾಗರ.